www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

ರೂ 1 ಲಕ್ಷ ಕೋಟಿ ಹೂಡಿಕೆ: ಬೆಂಗಳೂರಿನ ಅಭಿವೃದ್ಧಿಗೆ 10 ವರ್ಷಗಳ ಮಾರ್ಗಸೂಚಿ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನ ಅಪಾರ ಸಾಮರ್ಥ್ಯಕ್ಕೆ ತಕ್ಕಂತೆ ಭವಿಷ್ಯವನ್ನು ರೂಪಿಸುವುದು ಸರ್ಕಾರದ ಜವಾಬ್ದಾರಿಯಾಗಿದ್ದು, ನಗರದ ಸಮಗ್ರ ಅಭಿವೃದ್ಧಿಗಾಗಿ ಮುಂದಿನ ಹತ್ತು ವರ್ಷಗಳ ಮಾರ್ಗಸೂಚಿ ಸಿದ್ಧಪಡಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಸುಮಾರು ರೂ 1 ಲಕ್ಷ ಕೋಟಿ ಹೂಡಿಕೆಯೊಂದಿಗೆ ರೂಪಿಸಿರುವ ಅಭಿವೃದ್ಧಿ ಯೋಜನೆಯು 2037ರಲ್ಲಿ 500ನೇ ವಾರ್ಷಿಕೋತ್ಸವ ಆಚರಿಸಲಿರುವ ಬೆಂಗಳೂರಿಗೆ ಮಹತ್ವಾಕಾಂಕ್ಷೆಯ ದೃಷ್ಟಿಕೋನ ಹೊಂದಿದೆ ಎಂದು ಹೇಳಿದ್ದಾರೆ.

ಉತ್ತಮ ರಸ್ತೆಗಳು, ವಿಸ್ತೃತ ಸಾರ್ವಜನಿಕ ಸಾರಿಗೆ ವ್ಯವಸ್ಥೆ, ನಿರಂತರ ನೀರು ಪೂರೈಕೆ, ಸುಧಾರಿತ ನಾಗರಿಕ ಮೂಲಸೌಕರ್ಯ ಹಾಗೂ ಸ್ವಚ್ಛ ಬಡಾವಣೆಗಳ ಮೂಲಕ ಜನರು ಸುಲಭವಾಗಿ ಬದುಕು ಸಾಗಿಸಬಹುದಾದ, ಉತ್ತಮ ಸಂಪರ್ಕ ಹೊಂದಿರುವ ಮತ್ತು ಭವಿಷ್ಯದ ಅಗತ್ಯಗಳಿಗೆ ಸಜ್ಜಾಗಿರುವ ನಗರವನ್ನು ನಿರ್ಮಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

ನಗರದ ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಸುರಂಗ ಮಾರ್ಗಗಳು, ಎಲಿವೇಟೆಡ್ ಕಾರಿಡಾರ್‌ಗಳು, ಮೆಟ್ರೊ ಹಾಗೂ ಉಪನಗರ ರೈಲು ಯೋಜನೆಗಳ ಮೂಲಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸಲು ಆದ್ಯತೆ ನೀಡಲಾಗುವುದು. ಜತೆಗೆ ಒಳಚರಂಡಿ ವ್ಯವಸ್ಥೆಯ ಸುಧಾರಣೆ ಮತ್ತು ವೈಜ್ಞಾನಿಕ ತ್ಯಾಜ್ಯ ನಿರ್ವಹಣೆಗೆ ಒತ್ತು ನೀಡಿ ಬೆಂಗಳೂರನ್ನು ಹೆಚ್ಚು ವಾಸಯೋಗ್ಯ ನಗರವನ್ನಾಗಿ ರೂಪಿಸಲಾಗುವುದು ಎಂದು ಹೇಳಿದ್ದಾರೆ.

ಬೆಂಗಳೂರಿನ ಬೆಳವಣಿಗೆಯು ಪ್ರತಿಯೊಬ್ಬ ನಾಗರಿಕನ ಜೀವನಮಟ್ಟವನ್ನು ಸುಧಾರಿಸುವಂತಿರಬೇಕು. ಈ ನಿಟ್ಟಿನಲ್ಲಿ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಯೊಂದಿಗೆ ಸುಸ್ಥಿರ ಹಾಗೂ ಸುಗಮ ಸಂಚಾರ ವ್ಯವಸ್ಥೆ ಹೊಂದಿರುವ ನಗರ ನಿರ್ಮಾಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಸೌಜನ್ಯ ಪ್ರಕರಣ: ಅಂದಿನ ಮೂವರು ಪೊಲೀಸ್ ಅಧಿಕಾರಿಗಳ ವಿಚಾರಣೆ

● ವಿಕ್ರಮ ವಾಹಿನಿ । ಬೆಂಗಳೂರು

ಧರ್ಮಸ್ಥಳದ ಸೌಜನ್ಯ ಕೊಲೆ ಪ್ರಕರಣದ ಮರುತನಿಖೆಯನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ಚುರುಕುಗೊಳಿಸಿದ್ದು, ಪ್ರಕರಣದ ಆರಂಭಿಕ ತನಿಖೆ ನಡೆಸಿದ್ದ ಮೂವರು ಪೊಲೀಸ್ ಅಧಿಕಾರಿಗಳನ್ನು ಗುರುವಾರ ವಿಚಾರಣೆಗೊಳಪಡಿಸಿದೆ.

ಅಂದಿನ ಬೆಳ್ತಂಗಡಿ ಪೊಲೀಸ್ ಠಾಣೆಯ ಸಬ್‌ಇನ್‌ಸ್ಪೆಕ್ಟರ್ ಯೋಗೇಶ್, ಸರ್ಕಲ್ ಇನ್‌ಸ್ಪೆಕ್ಟರ್ ಭಾಸ್ಕರ್ ರೈ ಹಾಗೂ ಸಿಐಡಿ ಡಿವೈಎಸ್‌ಪಿ ರುದ್ರಮುನಿ ಅವರು ಮಂಗಳೂರಿನ ಹಳೆಯ ಜಿಲ್ಲಾಧಿಕಾರಿ ಕಚೇರಿ ಕಟ್ಟಡದಲ್ಲಿ ತೆರೆಯಲಾಗಿರುವ ಎಸ್‌ಐಟಿ ಕಚೇರಿಗೆ ಸಂಬಂಧಿತ ದಾಖಲೆಗಳೊಂದಿಗೆ ಹಾಜರಾದರು.

ತನಿಖಾಧಿಕಾರಿ ಮನೋಜ್‌ಕುಮಾರ್ ನಾಯಕ್ ಅವರು ಮೂವರು ಅಧಿಕಾರಿಗಳನ್ನು ಪ್ರತ್ಯೇಕವಾಗಿ ವಿಚಾರಣೆ ನಡೆಸಿ, ಪ್ರಕರಣಕ್ಕೆ ಸಂಬಂಧಿಸಿದ ಹಲವು ಮಾಹಿತಿಗಳನ್ನು ಸಂಗ್ರಹಿಸಿದ್ದಾರೆ ಎಂದು ತಿಳಿದುಬಂದಿದೆ. 2012ರಲ್ಲಿ ಪ್ರಕರಣ ನಡೆದ ಆರಂಭಿಕ ದಿನಗಳಲ್ಲಿ ಪ್ರಮುಖ ಸಾಕ್ಷ್ಯಗಳನ್ನು ನಾಶಪಡಿಸಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದ ಹಿನ್ನೆಲೆಯಲ್ಲಿ, ಅಂದಿನ ತನಿಖೆಯ ವಿವರಗಳು ಹಾಗೂ ದಾಖಲೆಗಳ ಪರಿಶೀಲನೆಗೆ ಎಸ್‌ಐಟಿ ಮುಂದಾಗಿದೆ.

ಪ್ರಕರಣದ ಮರುತನಿಖೆ ನಡೆಸಿ ಮೂರು ತಿಂಗಳೊಳಗೆ ವರದಿ ಸಲ್ಲಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿರುವ ಹಿನ್ನೆಲೆಯಲ್ಲಿ ತನಿಖಾ ತಂಡ ಕಾರ್ಯಾಚರಣೆಯನ್ನು ತೀವ್ರಗೊಳಿಸಿದೆ. ಇತ್ತೀಚೆಗಷ್ಟೇ ಸೌಜನ್ಯ ಅವರ ತಾಯಿ ಕುಸುಮಾವತಿ ಅವರ ರಕ್ತದ ಮಾದರಿಯನ್ನೂ ಸಂಗ್ರಹಿಸಲಾಗಿತ್ತು.

ತನಿಖೆಯ ಮುಂದುವರಿದ ಭಾಗವಾಗಿ ಮೂವರು ಪೊಲೀಸ್ ಅಧಿಕಾರಿಗಳಿಗೆ ನೋಟಿಸ್ ಜಾರಿಗೊಳಿಸಲಾಗಿತ್ತು. ಅದರಂತೆ ಅವರು ವಿಚಾರಣೆಗೆ ಹಾಜರಾಗಿದ್ದಾರೆ. ಇದೇ ವೇಳೆ, ಎಸ್‌ಐಟಿ ಮುಖ್ಯಸ್ಥ ಐಜಿಪಿ ಶಶಿಕುಮಾರ್ ಅವರು ಬುಧವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಪ್ರಕರಣದ ತನಿಖೆಯ ಕುರಿತು ಮಾಹಿತಿ ನೀಡಿ ಚರ್ಚಿಸಿದ್ದಾರೆ.

ಅಗಲಿದ ಪತ್ರಕರ್ತರಿಗೆ ಕೆಯುಡಬ್ಲ್ಯೂಜೆ ನುಡಿ ನಮನ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ರಾಜ್ಯ ಸಂಘದ (ಕೆಯುಡಬ್ಲ್ಯೂಜೆ) ವತಿಯಿಂದ ಇತ್ತೀಚೆಗೆ ನಿಧನರಾದ ಶಿವಮೊಗ್ಗದ ಹಿರಿಯ ಪತ್ರಕರ್ತ ಬಂಡಿಗಡಿ ನಂಜುಂಡಪ್ಪ ಹಾಗೂ ಚಾಮರಾಜನಗರದ ಹಿರಿಯ ಪತ್ರಿಕಾ ಛಾಯಾಗ್ರಾಹಕ ಸಿ.ಆರ್. ವೆಂಕಟರಾವ್ ಅವರಿಗೆ ಗುರುವಾರ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ನಗರದ ಕಂದಾಯ ಭವನದಲ್ಲಿರುವ ಕೆಯುಡಬ್ಲ್ಯೂಜೆ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಅಗಲಿದ ಪತ್ರಕರ್ತರನ್ನು ಸ್ಮರಿಸಿ, ಅವರ ಆತ್ಮಕ್ಕೆ ಶಾಂತಿ ಕೋರಿ ಒಂದು ನಿಮಿಷ ಮೌನಾಚರಣೆ ನಡೆಸಿ ಪುಷ್ಪನಮನ ಸಲ್ಲಿಸುವ ಪರಂಪರೆಯನ್ನು ಸಂಘ ಮುಂದುವರಿಸಿಕೊಂಡು ಬಂದಿದೆ ಎಂದರು.

ಬಂಡಿಗಡಿ ನಂಜುಂಡಪ್ಪ ಅವರು ರಾಜ್ಯ ಸಂಘದ ಕಾರ್ಯಕಾರಿ ಸಮಿತಿ ಹಾಗೂ ರಾಷ್ಟ್ರೀಯ ಮಂಡಳಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ಇತ್ತೀಚಿನವರೆಗೂ ಸಂಘದೊಂದಿಗೆ ನಿರಂತರ ಸಂಪರ್ಕ ಹೊಂದಿದ್ದ ಅವರು ಪತ್ರಿಕಾರಂಗಕ್ಕೆ ಮತ್ತು ಸಂಘಕ್ಕೆ ನೀಡಿದ ಕೊಡುಗೆ ಸ್ಮರಣೀಯ. ಅವರಿಗೆ ತಡವಾಗಿಯಾದರೂ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಲಭಿಸಿದ್ದು ಸಂತಸದ ಸಂಗತಿ ಎಂದು ಹೇಳಿದರು.

ಚಾಮರಾಜನಗರದ ಹಿರಿಯ ಪತ್ರಿಕಾ ಛಾಯಾಗ್ರಾಹಕ ಸಿ.ಆರ್. ವೆಂಕಟರಾವ್ ಅವರು ಸಂಘದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಪ್ರಜಾವಾಣಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಅವರು ಎಲ್ಲರೊಂದಿಗೂ ಆತ್ಮೀಯವಾಗಿ ಬೆರೆಯುತ್ತಿದ್ದರು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ ಸ್ಮರಿಸಿದರು.

ಹಿರಿಯ ಪತ್ರಕರ್ತರಾದ ಶಿವಾನಂದ್ ಮತ್ತು ಶಶಿಕಲಾ ಅವರು ಅಗಲಿದ ಪತ್ರಕರ್ತರ ಸೇವೆ ಹಾಗೂ ವ್ಯಕ್ತಿತ್ವವನ್ನು ನೆನಪಿಸಿಕೊಂಡರು. ಸಂಘದ ಖಜಾಂಚಿ ಎಂ. ವಾಸುದೇವ ಹೊಳ್ಳ, ಶಿವಮೊಗ್ಗದ ಪತ್ರಕರ್ತ ಟೆಲೆಕ್ಸ್ ರವಿ ಸೇರಿದಂತೆ ಹಲವು ಪತ್ರಕರ್ತರು ಉಪಸ್ಥಿತರಿದ್ದರು.

ಗಡಿ ಪತ್ರಿಕೆಗಳ ವಿಶೇಷ ಜಾಹೀರಾತು ರದ್ದು: ಸಂಪಾದಕರ ಸಂಘದ ಆಕ್ಷೇಪ

● ವಿಕ್ರಮ ವಾಹಿನಿ । ಬೆಂಗಳೂರು

ಪರಿಷ್ಕೃತ ಜಾಹೀರಾತು ನೀತಿ–2026ರಲ್ಲಿ ಗಡಿಭಾಗದ ಕನ್ನಡ ದಿನಪತ್ರಿಕೆಗಳಿಗೆ ನೀಡಲಾಗುತ್ತಿದ್ದ ಮಾಸಿಕ ಒಂದು ಪುಟದ ವಿಶೇಷ ಜಾಹೀರಾತು ಸೌಲಭ್ಯ ರದ್ದುಗೊಳಿಸಿರುವುದಕ್ಕೆ ಕರ್ನಾಟಕ ಗಡಿ ಪತ್ರಿಕೆಗಳ ಸಂಪಾದಕರ ಸಂಘ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಗಡಿಭಾಗಗಳಲ್ಲಿ ಕನ್ನಡ ಭಾಷೆ ಮತ್ತು ಕನ್ನಡಿಗರ ಹಕ್ಕುಗಳ ರಕ್ಷಣೆಯಲ್ಲಿ ಸ್ಥಳೀಯ ಪತ್ರಿಕೆಗಳ ಪಾತ್ರ ಮಹತ್ವದ್ದಾಗಿದ್ದು, ವಿಶೇಷ ಜಾಹೀರಾತು ಸೌಲಭ್ಯವನ್ನು ಮರುಜಾರಿಗೊಳಿಸುವುದರ ಜತೆಗೆ ಜಾಹೀರಾತು ದರವನ್ನು ಶೇ.18ರಷ್ಟು ಹೆಚ್ಚಿಸಿ ಪತ್ರಿಕೆಗಳ ಆರ್ಥಿಕ ಸಂಕಷ್ಟ ನಿವಾರಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದೆ.

ಗಡಿಭಾಗದ ಕನ್ನಡ ದಿನಪತ್ರಿಕೆಗಳಿಗೆ ನೀಡಲಾಗುತ್ತಿದ್ದ ವಿಶೇಷ ಜಾಹೀರಾತನ್ನು ಪರಿಷ್ಕೃತ ಜಾಹೀರಾತು ನೀತಿ–2026ರಲ್ಲಿ ರದ್ದುಗೊಳಿಸಿರುವುದು ಅವೈಜ್ಞಾನಿಕ ಹಾಗೂ ಆಘಾತಕಾರಿ ನಿರ್ಧಾರ ಎಂದು ಕರ್ನಾಟಕ ಗಡಿ ಪತ್ರಿಕೆಗಳ ಸಂಪಾದಕರ ಸಂಘ ಕಳವಳ ವ್ಯಕ್ತಪಡಿಸಿದೆ. ವಿಶೇಷ ಜಾಹೀರಾತು ಸೌಲಭ್ಯವನ್ನು ಮುಂದುವರಿಸುವುದರ ಜತೆಗೆ ಜಾಹೀರಾತು ದರವನ್ನು ಹೆಚ್ಚಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದೆ.

ನಗರದ ಗಾಂಧಿ ಭವನದಲ್ಲಿ ನಡೆದ ಸಂಘದ ಸಭೆಯಲ್ಲಿ ಪರಿಷ್ಕೃತ ಜಾಹೀರಾತು ನೀತಿಯ ಕುರಿತು ಚರ್ಚೆ ನಡೆಸಲಾಯಿತು. ಬಳಿಕ ಈ ಕುರಿತು ಮುಖ್ಯಮಂತ್ರಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗಮನಕ್ಕೆ ತರುವಂತೆ ಮನವಿ ಸಲ್ಲಿಸಲಾಯಿತು.

2013–14ರ ಜಾಹೀರಾತು ನೀತಿಯಡಿ ಗಡಿಭಾಗದ ಕನ್ನಡ ದಿನಪತ್ರಿಕೆಗಳಿಗೆ ಪ್ರತಿ ತಿಂಗಳು ಒಂದು ಪುಟದ ವಿಶೇಷ ಜಾಹೀರಾತು ನೀಡಲಾಗುತ್ತಿತ್ತು. ಇದರಿಂದ ಗಡಿಜಿಲ್ಲೆಗಳಲ್ಲಿ ಕನ್ನಡ ಭಾಷೆಯ ಬೆಳವಣಿಗೆಗೆ ಉತ್ತೇಜನ ದೊರೆಯುವುದರ ಜತೆಗೆ ಕನ್ನಡಿಗರ ಹಕ್ಕುಗಳ ರಕ್ಷಣೆಯ ಹೋರಾಟಕ್ಕೂ ಬಲ ಸಿಕ್ಕಿದೆ ಎಂದು ಸಂಘ ಅಭಿಪ್ರಾಯಪಟ್ಟಿದೆ.

ಗಡಿಭಾಗಗಳಲ್ಲಿ ಕನ್ನಡ ಭಾಷೆ ಮತ್ತು ಕನ್ನಡಿಗರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ನಡುವೆಯೇ ವಿಶೇಷ ಜಾಹೀರಾತು ಸೌಲಭ್ಯ ರದ್ದುಗೊಳಿಸುವುದು ಆತಂಕಕಾರಿ. ಗಡಿಭಾಗದಲ್ಲಿ ಕನ್ನಡದ ಅಸ್ತಿತ್ವವನ್ನು ಉಳಿಸುವಲ್ಲಿ ಸ್ಥಳೀಯ ಕನ್ನಡ ಪತ್ರಿಕೆಗಳು ಹಾಗೂ ಕನ್ನಡಪರ ಸಂಘಟನೆಗಳ ಪಾತ್ರ ಮಹತ್ವದ್ದಾಗಿದೆ. ಹೀಗಾಗಿ ಸರ್ಕಾರ ಈ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಸಂಘ ಆಗ್ರಹಿಸಿದೆ.

ಕೋವಿಡ್ ನಂತರ ಮುದ್ರಣ ಕಚ್ಚಾ ವಸ್ತುಗಳ ಬೆಲೆ ಹಾಗೂ ವಿದ್ಯುತ್ ದರ ಏರಿಕೆಯಿಂದ ಪತ್ರಿಕೆಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ. ಇಂತಹ ಸಂದರ್ಭದಲ್ಲಿ ಜಾಹೀರಾತು ದರವನ್ನು ಶೇ.12ರಿಂದ ಶೇ.6ಕ್ಕೆ ಇಳಿಸಿರುವುದು ಪತ್ರಿಕೆಗಳ ಅಸ್ತಿತ್ವಕ್ಕೆ ಧಕ್ಕೆ ಉಂಟುಮಾಡಲಿದೆ ಎಂದು ಸಂಘ ಆತಂಕ ವ್ಯಕ್ತಪಡಿಸಿದೆ. ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಉಳಿವಿಗಾಗಿ ಜಾಹೀರಾತು ದರವನ್ನು ಶೇ.18ರಷ್ಟು ಹೆಚ್ಚಿಸಬೇಕಿತ್ತು ಎಂದು ಅಭಿಪ್ರಾಯಪಟ್ಟಿದೆ.

2013ರ ಜಾಹೀರಾತು ನೀತಿಯಲ್ಲಿದ್ದಂತೆ ಗಡಿಭಾಗದ ಪತ್ರಿಕೆಗಳಿಗೆ ಪ್ರತಿ ತಿಂಗಳು ಒಂದು ಪುಟದ ವಿಶೇಷ ಜಾಹೀರಾತು ನೀಡುವ ವ್ಯವಸ್ಥೆಯನ್ನು ಮುಂದುವರಿಸಬೇಕು. ಪ್ರತಿ ಎರಡು ವರ್ಷಕ್ಕೊಮ್ಮೆ ಪರಿಷ್ಕರಿಸುವ ಜಾಹೀರಾತು ದರವನ್ನು ಶೇ.18ಕ್ಕೆ ಹೆಚ್ಚಿಸಬೇಕು ಎಂದು ಸಂಘ ಸರ್ಕಾರವನ್ನು ಒತ್ತಾಯಿಸಿದೆ.

ಸಭೆಯಲ್ಲಿ ಬೆಳಗಾವಿ, ವಿಜಯಪುರ, ಬೀದರ್, ರಾಯಚೂರು, ಯಾದಗಿರಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಚಾಮರಾಜನಗರ, ಚಿಕ್ಕಬಳ್ಳಾಪುರ ಹಾಗೂ ಚಿತ್ರದುರ್ಗ ಜಿಲ್ಲೆಗಳ ಗಡಿ ಪತ್ರಿಕೆಗಳ ಸಂಪಾದಕರ ಸಂಘದ ಸಂಚಾಲಕರು ಪಾಲ್ಗೊಂಡಿದ್ದರು.

ಕಾಂಗ್ರೆಸ್ ಶೂನ್ಯಕ್ಕೆ: .ಡಿ. ಕುಮಾರಸ್ವಾಮಿ ಟಾಂಗ್

● ವಿಕ್ರಮ ವಾಹಿನಿ । ನವದೆಹಲಿ

ವಿಧಾನ ಪರಿಷತ್ ಚುನಾವಣೆಯಲ್ಲಿ ನಾಲ್ಕಕ್ಕೆ ನಾಲ್ಕು ಕ್ಷೇತ್ರಗಳಲ್ಲಿ ಸೋಲು ಕಂಡ ಕಾಂಗ್ರೆಸ್ ಪಕ್ಷಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತೀಕ್ಷ್ಣವಾಗಿ ಟಾಂಗ್ ನೀಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಕಾಂಗ್ರೆಸ್ ಪಕ್ಷವನ್ನು 'ಶೂನ್ಯಕ್ಕಿಳಿದ ಕ್ರಾಸ್ ವೋಟ್ ಕಾಂಗ್ರೆಸ್' ಎಂದು ವ್ಯಂಗ್ಯವಾಡಿದ್ದಾರೆ.

ಎನ್‌ಡಿಎ ಅಭ್ಯರ್ಥಿಗಳ ಗೆಲುವಿಗೆ ಅಡ್ಡಮತದಾನ ಕಾರಣವಲ್ಲ ಎಂದು ಪ್ರತಿಪಾದಿಸಿರುವ ಕುಮಾರಸ್ವಾಮಿ, "ಗೆದ್ದ ನಮ್ಮವರು ನಾಲ್ವರು ಅಡ್ಡಮತ ಪಡೆದ ಅಭ್ಯರ್ಥಿಗಳಲ್ಲ. ಅಡ್ಡಕಸಬಿಗಳ ಆತ್ಮಾವಲೋಕನಕ್ಕೆ ಇದು ಸಕಾಲ. ಅಡ್ಡಮತದ ಫಲಾನುಭವಿಯನ್ನು ನಮ್ಮ ವೀರರು ಎದುರಿಸಲಿದ್ದಾರೆ" ಎಂದು ಹೇಳಿದ್ದಾರೆ.

ಪರಿಷತ್ ಚುನಾವಣೆಯ ಫಲಿತಾಂಶವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿರುವ ಅವರು, 'ಜೈ ಎನ್‌ಡಿಎ' ಎಂದು ಘೋಷಣೆ ಮೊಳಗಿಸಿದ್ದಾರೆ.

ಕಾಂಗ್ರೆಸ್ ಸೋಲನ್ನು ಮುಂದಿಟ್ಟುಕೊಂಡು ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಕಾಶಿಯ ಅಸ್ಸಿ ಘಾಟ್‌ನಲ್ಲಿ ನಾಟ್ಯ ಸನ್ನಿಧಿ ಭರತನಾಟ್ಯಕ್ಕೆ ಮೆಚ್ಚುಗೆ

● ವಿಕ್ರಮ ವಾಹಿನಿ । ವಾರಣಾಸಿ

ಉತ್ತರ ಪ್ರದೇಶದ ವಾರಣಾಸಿಯ ಪವಿತ್ರ ಗಂಗಾ ತಟದಲ್ಲಿರುವ ಪ್ರಸಿದ್ಧ ಅಸ್ಸಿ ಘಾಟ್‌ನಲ್ಲಿ ನಡೆದ 'ಗಂಗಾ ಸಂಧ್ಯಾ' ಕಾರ್ಯಕ್ರಮದಲ್ಲಿ ಬೆಂಗಳೂರಿನ ನಾಟ್ಯ ಸನ್ನಿಧಿ ನೃತ್ಯ ಸಂಸ್ಥೆಯ ಕಲಾವಿದರು ಪ್ರಸ್ತುತಪಡಿಸಿದ ಭರತನಾಟ್ಯ ಪ್ರದರ್ಶನ ಪ್ರೇಕ್ಷಕರ ಮನಸೂರೆಗೊಂಡಿತು.

ಗುರು ಮೋನಿಷಾ ನವೀನ್ ಅವರ ಮಾರ್ಗದರ್ಶನದಲ್ಲಿ ಸಂಸ್ಥೆಯ 17 ಕಲಾವಿದರು ಭಕ್ತಿ ಮತ್ತು ಶಾಸ್ತ್ರೀಯ ನೃತ್ಯದ ಸೊಬಗನ್ನು ಅನಾವರಣಗೊಳಿಸಿದರು.

ಕಾಶಿಯ ಆಧ್ಯಾತ್ಮಿಕ ಮಹಿಮೆಯನ್ನು ಸಾರಿದ ಈ ನೃತ್ಯ ಪ್ರದರ್ಶನಕ್ಕೆ ನೆರೆದಿದ್ದ ನೂರಾರು ಪ್ರೇಕ್ಷಕರು ಹಾಗೂ ವಿದೇಶಿ ಪ್ರವಾಸಿಗರಿಂದ ಮೆಚ್ಚುಗೆ

ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಗುರು ಮೋನಿಷಾ ನವೀನ್, "ಬಾಬಾ ವಿಶ್ವನಾಥನ ಪವಿತ್ರ ನಗರಿ ಕಾಶಿಯಲ್ಲಿ ನೃತ್ಯ ಸೇವೆ ಸಲ್ಲಿಸುವ ಅವಕಾಶ ದೊರೆತಿರುವುದು ನಮ್ಮೆಲ್ಲರ ಪುಣ್ಯ ಹಾಗೂ ದೇವರ ಕೃಪೆ" ಎಂದು ಸಂತಸ ವ್ಯಕ್ತಪಡಿಸಿದರು.

ತನಿಷಾ ಎನ್. ಸುಮೋಹನ, ರಂಜಿತಾ ಬಿ.ಎನ್., ಎಂ.ಬಿ. ಪ್ರಣತಿ, ಗಾನವಿ ಆರ್., ಯಶಸ್ವಿನಿ ಎಸ್., ಕೆ.ಆರ್. ಲಾವಣ್ಯ, ವಿನಿಶಾ ಕೃಷ್ಣಾ, ಕೃತಿಕಾ ಆರ್., ಜಾಗೃತಿ ಕೆ., ಭಾವಿಷ್ಣಿ ಪಿ., ಸಂಯಮ ಬಿ.ಎಸ್., ಸಾಹಿತ್ಯ ಬಿ.ಎಸ್., ತೇಜಸ್ವಿನಿ ಬಿ.ಆರ್., ಇಂದು ಎಸ್., ನಿಧಿ ಶೆಟ್ಟಿ ಎಂ.ಬಿ., ಚಿರಂಜೀವಿ ಎನ್. ಸುಮೋಹನ ಮತ್ತು ಪೂರ್ವಿ ಎಸ್. ನೃತ್ಯ ಪ್ರದರ್ಶನ ನೀಡಿದರು.

ಎಸ್‌ಐಆರ್: ಜಿಬಿಎ ಚುನಾವಣೆ ಮೇಲೆ ಕಾರ್ಮೋಡ, ಲೆಕ್ಕಾಚಾರದಲ್ಲಿ ಏರುಪೇರು

48 ಲಕ್ಷ ಮತದಾರರ ಹೆಸರು ಕೈಬಿಟ್ಟಿದ್ದರಿಂದ ವಾರ್ಡ್‌ವಾರು ಲೆಕ್ಕಾಚಾರದಲ್ಲಿ ಬದಲಾವಣೆ ಸಾಧ್ಯತೆ; ಡಿಸೆಂಬರ್ ಗಡುವಿನೊಳಗೆ ಚುನಾವಣೆ ನಡೆಸುವುದು ಆಯೋಗಕ್ಕೆ ಸವಾಲು

● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಳಿಕ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಲ್ಲಿ 59,08,151 ಮತದಾರರು ಮಾತ್ರ ಉಳಿದಿದ್ದಾರೆ ಎಂದು ಲಭ್ಯ ಅಂಕಿ–ಅಂಶಗಳು ಸೂಚಿಸಿವೆ. ಸುಮಾರು 48 ಲಕ್ಷ ಮತದಾರರ ಹೆಸರುಗಳು ಪಟ್ಟಿಯಿಂದ ಕೈಬಿಡಲಾಗಿರುವ ಹಿನ್ನೆಲೆಯಲ್ಲಿ, ವಾರ್ಡ್‌ವಾರು ಮತದಾರರ ಸಂಖ್ಯೆಯಲ್ಲಿ ಭಾರಿ ವ್ಯತ್ಯಾಸ ಉಂಟಾಗುವ ಸಾಧ್ಯತೆಯಿದೆ. ಇದು ಮುಂಬರುವ ಐದು ನಗರ ಪಾಲಿಕೆಗಳ ಚುನಾವಣಾ ಸಿದ್ಧತೆಗೆ ಹೊಸ ಸವಾಲು ತಂದೊಡ್ಡಿದೆ.

ಜಿಬಿಎ ವ್ಯಾಪ್ತಿಯ 369 ವಾರ್ಡ್‌ಗಳಲ್ಲಿ ಈ ಹಿಂದೆ ಸರಾಸರಿ 24,100 ಮತದಾರರಿದ್ದರು ಎಂದು ಅಂದಾಜಿಸಲಾಗಿತ್ತು. ಪರಿಷ್ಕೃತ ಪಟ್ಟಿಯ ಬಳಿಕ ವಾರ್ಡ್‌ವೊಂದರ ಸರಾಸರಿ ಮತದಾರರ ಸಂಖ್ಯೆ ಸುಮಾರು 16 ಸಾವಿರಕ್ಕೆ ಇಳಿದಿದೆ. ಹೀಗಾಗಿ, ವಾರ್ಡ್‌ವಾರು ಮತದಾರರ ವಿಂಗಡಣೆ ಮತ್ತು ಚುನಾವಣಾ ಸಿದ್ಧತೆಗಳನ್ನು ಮರುಪರಿಶೀಲಿಸುವ ಅಗತ್ಯ ಎದುರಾಗಬಹುದು.

ವಾರ್ಡ್‌ವಾರು ಲೆಕ್ಕಾಚಾರದಲ್ಲಿ ಬದಲಾವಣೆ ಸಾಧ್ಯತೆ

ಮತದಾರರ ಸಂಖ್ಯೆಯಲ್ಲಿನ ಇಳಿಕೆಯಿಂದ ವಿವಿಧ

ವಾರ್ಡ್‌ಗಳ ಚುನಾವಣಾ ಲೆಕ್ಕಾಚಾರ ಬದಲಾಗುವ ಸಾಧ್ಯತೆಯಿದೆ. ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ಕೆಲವು ವಾರ್ಡ್‌ಗಳಲ್ಲಿ ಮತದಾರರ ಸಂಖ್ಯೆ ಹೆಚ್ಚಾಗಿದ್ದರೆ, ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಕೆಲವು ವಾರ್ಡ್‌ಗಳಲ್ಲಿ ಗಣನೀಯವಾಗಿ ಕಡಿಮೆಯಾಗಬಹುದು ಎಂಬ ನಿರೀಕ್ಷೆಯಿದೆ. ಕೆಲವು ವಾರ್ಡ್‌ಗಳಲ್ಲಿ ಮತದಾರರ ಸಂಖ್ಯೆ 10 ಸಾವಿರಕ್ಕಿಂತ ಕೆಳಗಿಳಿಯುವ ಸಾಧ್ಯತೆಯೂ ಇದೆ.

ವಾರ್ಡ್‌ವಾರು ಮತದಾರರ ಪಟ್ಟಿಯನ್ನು ಸಿದ್ಧಪಡಿಸುವಾಗ 2011ರ ಜನಗಣತಿಯ ಆಧಾರದಲ್ಲಿ ನಿಗದಿಪಡಿಸಿರುವ ವಾರ್ಡ್‌ಗಳ ವ್ಯಾಪ್ತಿ ಮತ್ತು ಜನಸಂಖ್ಯೆಯ ಹಂಚಿಕೆಯನ್ನು ಗಮನದಲ್ಲಿಟ್ಟುಕೊಳ್ಳಬೇಕಿದೆ. ಪರಿಷ್ಕೃತ ಮತದಾರರ ಸಂಖ್ಯೆ, ವಾರ್ಡ್‌ಗಳ ಗಡಿ ಮತ್ತು ಮೀಸಲಾತಿಯನ್ನು ಸಮನ್ವಯಗೊಳಿಸುವುದು ಚುನಾವಣಾ ಸಿದ್ಧತೆಯ ಪ್ರಮುಖ ಹಂತವಾಗಲಿದೆ.

ನಾಲ್ಕು ಪಾಲಿಕೆಗಳ ಮತದಾರರ ವಿವರ: ಲಭ್ಯವಿರುವ ಅಂಕಿ–ಅಂಶಗಳ ಪ್ರಕಾರ, ಬೆಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ 24,01,939, ಬೆಂಗಳೂರು ಉತ್ತರದಲ್ಲಿ 13,25,284, ಬೆಂಗಳೂರು ಕೇಂದ್ರದಲ್ಲಿ 10,67,374 ಹಾಗೂ ಬೆಂಗಳೂರು ದಕ್ಷಿಣದಲ್ಲಿ 11,13,554 ಮತದಾರರಿದ್ದಾರೆ. ಈ ನಾಲ್ಕು ಪಾಲಿಕೆಗಳ ಒಟ್ಟು ಮತದಾರರ ಸಂಖ್ಯೆ 59,08,151 ಎಂದು ತಿಳಿಸಲಾಗಿದೆ.

ಡಿಸೆಂಬರ್ ಗಡುವಿನೊಳಗೆ ಚುನಾವಣೆ ಸವಾಲು

ಐದು ನಗರ ಪಾಲಿಕೆಗಳ ಚುನಾವಣೆಗಳನ್ನು ಡಿಸೆಂಬರ್ 30ರೊಳಗೆ ಪೂರ್ಣಗೊಳಿಸುವಂತೆ ಸುಪ್ರೀಂ ಕೋರ್ಟ್ ಗಡುವು ನೀಡಿರುವ ಹಿನ್ನೆಲೆಯಲ್ಲಿ, ರಾಜ್ಯ ಚುನಾವಣಾ ಆಯೋಗದ ಮುಂದಿರುವ ಸಮಯಾವಕಾಶ ಸೀಮಿತವಾಗಿದೆ. ಮತದಾರರ ಪಟ್ಟಿಯ ಸಿದ್ಧತೆ, ವಾರ್ಡ್‌ವಾರು ವಿಂಗಡಣೆ, ಮೀಸಲಾತಿ ಕುರಿತ ಪರಿಶೀಲನೆ ಮತ್ತು ಚುನಾವಣಾ ವೇಳಾಪಟ್ಟಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕಿದೆ.

ಮೊದಲಿಗೆ ಅಂತಿಮ ಮತದಾರರ ಪಟ್ಟಿಯ ಆಧಾರದಲ್ಲಿ ವಾರ್ಡ್‌ವಾರು ಪಟ್ಟಿಗಳನ್ನು ಸಿದ್ಧಪಡಿಸಬೇಕು. ಬಳಿಕ ಮೀಸಲಾತಿಯಲ್ಲಿ ಬದಲಾವಣೆ ಅಗತ್ಯವಿದೆಯೇ ಎಂಬುದನ್ನು ಪರಿಶೀಲಿಸಬೇಕಾಗಬಹುದು. ಯಾವುದೇ ಬದಲಾವಣೆಗಳಿದ್ದರೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಿ, ಅವುಗಳನ್ನು ವಿಲೇವಾರಿ ಮಾಡಬೇಕಾಗುತ್ತದೆ.

ಈ ಎಲ್ಲ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಡಿಸೆಂಬರ್ ಅಂತ್ಯದ ಗಡುವಿನೊಳಗೆ ಚುನಾವಣೆ ನಡೆಸಬೇಕಾದರೆ, ನವೆಂಬರ್ ಮೂರನೇ ವಾರದೊಳಗೆ ಚುನಾವಣಾ ವೇಳಾಪಟ್ಟಿ ಪ್ರಕಟಿಸುವ ಅಗತ್ಯ ಎದುರಾಗಬಹುದು ಎಂಬ ಲೆಕ್ಕಾಚಾರವಿದೆ. ಮತದಾನ, ಮತ ಎಣಿಕೆ ಮತ್ತು ಫಲಿತಾಂಶ ಪ್ರಕಟಣೆಯೂ ನಿಗದಿತ ಅವಧಿಯೊಳಗೆ ಪೂರ್ಣಗೊಳ್ಳಬೇಕಿದೆ.

ಒಟ್ಟಿನಲ್ಲಿ, ಎಸ್‌ಐಆರ್ ಬಳಿಕದ ಮತದಾರರ ಸಂಖ್ಯೆಯಲ್ಲಿನ ಇಳಿಕೆ, ವಾರ್ಡ್‌ವಾರು ಅಸಮತೋಲನ ಹಾಗೂ ಚುನಾವಣಾ ಪೂರ್ವಸಿದ್ಧತೆಗಳ ನಡುವೆ ಜಿಬಿಎ ಚುನಾವಣೆ ನಡೆಸುವುದು ರಾಜ್ಯ ಚುನಾವಣಾ ಆಯೋಗಕ್ಕೆ ದೊಡ್ಡ ಸವಾಲಾಗಿದೆ. ಸೀಮಿತ ಸಮಯದಲ್ಲಿ ಎಲ್ಲ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಆಯೋಗ ಯಾವ ಕ್ರಮ ಕೈಗೊಳ್ಳಲಿದೆ ಎಂಬುದರತ್ತ ರಾಜಕೀಯ ವಲಯದ ಗಮನ ನೆಟ್ಟಿದೆ.

ಅಪ್ಪು ನೆನಪಲ್ಲಿ ಮಿಂದೆದ್ದ ಕನ್ನಡಿಗರು

● ವಿಕ್ರಮ ವಾಹಿನಿ । ಬೆಂಗಳೂರು

ಕನ್ನಡಿಗರ ಮನದಲ್ಲಿ ಶಾಶ್ವತ ಸ್ಥಾನ ಪಡೆದಿರುವ ಪವರ್ ಸ್ಟಾರ್ ಡಾ. ಪುನೀತ್ ರಾಜ್‌ಕುಮಾರ್ ಅವರ ಐದನೇ ವರ್ಷದ ಪುಣ್ಯಸ್ಮರಣೆಯನ್ನು ರಾಜ್ಯಾದ್ಯಂತ ಭಾವಪೂರ್ಣವಾಗಿ ಆಚರಿಸಲಾಯಿತು. 2021ರ ಅ.29ರಂದು ಅಗಲಿದ ಪ್ರೀತಿಯ ನಟನನ್ನು ಅಭಿಮಾನಿಗಳು ನೆನಪಿಸಿಕೊಂಡು ಗೌರವ ನಮನ ಸಲ್ಲಿಸಿದರು.

ನಗರದ ಕಂಠೀರವ ಸ್ಟುಡಿಯೋದಲ್ಲಿರುವ ಪುನೀತ್ ರಾಜ್‌ಕುಮಾರ್ ಅವರ ಸಮಾಧಿಗೆ ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಹಾಗೂ ರಾಜ್‌ಕುಮಾರ್ ಕುಟುಂಬದ ಸದಸ್ಯರು ಬೆಳಗ್ಗೆಯೇ ವಿಶೇಷ ಪೂಜೆ ಸಲ್ಲಿಸಿ ಪುಷ್ಪನಮನ ಅರ್ಪಿಸಿದರು. ಕುಟುಂಬದವರು ಅಪ್ಪುಗೆ ಇಷ್ಟವಾದ ಅಡುಗೆಗಳನ್ನು ತಯಾರಿಸಿ ಎಡೆ ಇಟ್ಟು ಪ್ರಾರ್ಥಿಸಿದರು. ಬಣ್ಣಬಣ್ಣದ ಹೂಗಳಿಂದ ಸಮಾಧಿಯನ್ನು ಅಲಂಕರಿಸಲಾಗಿತ್ತು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಅಭಿಮಾನಿಗಳು ಕಂಠೀರವ ಸ್ಟುಡಿಯೋಗೆ ಆಗಮಿಸಿ ತಮ್ಮ ನೆಚ್ಚಿನ ನಟನಿಗೆ ನಮನ ಸಲ್ಲಿಸಿದರು. ಹೂವುಗಳನ್ನು ಅರ್ಪಿಸಿ, ಅಪ್ಪು ಅವರ ನೆನಪುಗಳನ್ನು ಮೆಲುಕು ಹಾಕಿದರು. ನಟನ ಸರಳತೆ, ಮಾನವೀಯತೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ಸ್ಮರಿಸಿ ಭಾವುಕರಾದರು.

ಪುನೀತ್ ಅವರ ಪುಣ್ಯಸ್ಮರಣೆಯ ಅಂಗವಾಗಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಭಿಮಾನಿಗಳು ದೇವಾಲಯಗಳಲ್ಲಿ ವಿಶೇಷ ಪೂಜೆ, ಅನ್ನದಾನ ಸೇರಿದಂತೆ ಹಲವು ಸಮಾಜಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು. ಬೆಂಗಳೂರಿನ ಹಲವು ಪ್ರದೇಶಗಳಲ್ಲಿ ಅಪ್ಪು ಅಭಿನಯದ ಚಿತ್ರಗಳ ಹಾಡುಗಳ ಸಂಗೀತ ಕಾರ್ಯಕ್ರಮಗಳನ್ನೂ ಆಯೋಜಿಸಲಾಗಿತ್ತು.

ರಾಜ್ಯದ ಪ್ರಮುಖ ಏಕಪರದೆ ಚಿತ್ರಮಂದಿರಗಳಲ್ಲಿ ಪುನೀತ್ ನಟನೆಯ 'ಅಪ್ಪು', 'ಅರಸು', 'ಮಿಲನ', 'ರಾಜಕುಮಾರ' ಸೇರಿದಂತೆ ಜನಪ್ರಿಯ ಚಿತ್ರಗಳನ್ನು ಪ್ರದರ್ಶಿಸಲಾಯಿತು. ಅವರ ಕೊನೆಯ ಸಾಕ್ಷ್ಯಚಿತ್ರ 'ಗಂಧದ ಗುಡಿ'ಯನ್ನೂ ಪ್ರದರ್ಶಿಸುವ ಮೂಲಕ ಅಭಿಮಾನಿಗಳು ನೆಚ್ಚಿನ ನಟನಿಗೆ ಗೌರವ ಸಲ್ಲಿಸಿದರು.

ಐದು ವರ್ಷ ಕಳೆದರೂ ಅಪ್ಪು ಮೇಲಿನ ಅಭಿಮಾನಿಗಳ ಪ್ರೀತಿ ಮತ್ತು ಅಭಿಮಾನ ಕಡಿಮೆಯಾಗಿಲ್ಲ. ಬೆಳ್ಳಿತೆರೆಯಲ್ಲಿ ತಮ್ಮ ಅಭಿನಯದ ಮೂಲಕ ಜನಮನ ಗೆದ್ದಿದ್ದ ಪುನೀತ್, ಸಮಾಜಸೇವೆಯ ಮೂಲಕವೂ ಜನರ ಹೃದಯದಲ್ಲಿ ಅಜರಾಮರವಾಗಿದ್ದಾರೆ.

ಹಾಸನಾಂಬೆ ದರ್ಶನೋತ್ಸವ ಆರಂಭ

● ವಿಕ್ರಮ ವಾಹಿನಿ । ಹಾಸನ

ವರ್ಷಕ್ಕೊಮ್ಮೆ ದರ್ಶನ ನೀಡುವ ಹಾಸನಾಂಬೆ ದೇವಾಲಯದ ಗರ್ಭಗುಡಿ ಬಾಗಿಲು ಬುಧವಾರ ಮಧ್ಯಾಹ್ನ 12.28ಕ್ಕೆ ತೆರೆಯಲಾಯಿತು. ಆರದ ದೀಪದ ದರ್ಶನ ಪಡೆದು ಭಕ್ತರು ಪುನೀತರಾದರು.

ಅ.29ರಿಂದ ನ.11ರವರೆಗೆ ನಡೆಯುವ ಉತ್ಸವದಲ್ಲಿ 30 ಲಕ್ಷಕ್ಕೂ ಹೆಚ್ಚು ಭಕ್ತರು ಆಗಮಿಸುವ ನಿರೀಕ್ಷೆಯಿದೆ. ದೇಗುಲಕ್ಕೆ ಆಕರ್ಷಕ ಹೂವಿನ ಅಲಂಕಾರ ಮಾಡಲಾಗಿದ್ದು, ಭಕ್ತರ ಅನುಕೂಲಕ್ಕಾಗಿ ವಿಶೇಷ ವ್ಯವಸ್ಥೆ ಹಾಗೂ ಬಿಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ.

ಭಕ್ತರ ದಟ್ಟಣೆ ನಿಯಂತ್ರಿಸಲು ಬ್ಯಾರಿಕೇಡ್ ವ್ಯವಸ್ಥೆ ಮಾಡಲಾಗಿದ್ದು, ಮೊದಲ ಮತ್ತು ಕೊನೆಯ ದಿನ ಹೊರತುಪಡಿಸಿ 12 ದಿನ ಸಾರ್ವಜನಿಕರಿಗೆ ದೇವಿಯ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

ಶನಿವಾರದಿಂದ 'ಸ್ಪಿರಿಟ್ ಆಫ್ ಯೂನಿಟಿ' ಸಂಗೀತೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು

ಸಂಗೀತದ ಮೂಲಕ ರಾಷ್ಟ್ರೀಯ ಏಕತೆ ಹಾಗೂ ಸಾಂಸ್ಕೃತಿಕ ಸಾಮರಸ್ಯ ಸಾರುವ 'ಸ್ಪಿರಿಟ್ ಆಫ್ ಯೂನಿಟಿ' ಸಂಗೀತೋತ್ಸವ ಅ.31 ಮತ್ತು ನ.1ರಂದು ಬೆಂಗಳೂರಿನ ಬಸವ ಸಮಿತಿಯ ಅನುಭವ ಮಂಟಪದಲ್ಲಿ ನಡೆಯಲಿದೆ. ಖ್ಯಾತ ಸಂಗೀತಗಾರರು ಶಾಸ್ತ್ರೀಯ ಗಾಯನ ಮತ್ತು ಸಿತಾರ್ ಜುಗಲ್‌ಬಂದಿ ಸೇರಿದಂತೆ ವೈವಿಧ್ಯಮಯ ಸಂಗೀತ ಪ್ರಸ್ತುತಿಗಳ ಮೂಲಕ ರಸಿಕರನ್ನು ರಂಜಿಸಲಿದ್ದಾರೆ.

ಸಂಗೀತದ ಮೂಲಕ ರಾಷ್ಟ್ರೀಯ ಏಕತೆಯ ಸಂದೇಶ ಸಾರುವ ಎರಡು ದಿನಗಳ 'ಸ್ಪಿರಿಟ್ ಆಫ್ ಯೂನಿಟಿ' ಸಂಗೀತೋತ್ಸವಕ್ಕೆ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ನ್ಯಾಯಮೂರ್ತಿ ಶಿವಶಂಕರೇಗೌಡ ಅವರು ಅ.31ರಂದು ಸಂಜೆ ಚಾಲನೆ ನೀಡಲಿದ್ದಾರೆ.

ಬಸವ ಸಮಿತಿ ಮತ್ತು ಸ್ವರ ಫೌಂಡೇಶನ್ ಜಂಟಿಯಾಗಿ ಆಯೋಜಿಸಿರುವ ಸಂಗೀತೋತ್ಸವವು ಹೈಗ್ರೌಂಡ್ಸ್‌ನ ಬಸವ ಸಮಿತಿಯ ಅನುಭವ ಮಂಟಪದಲ್ಲಿ ನಡೆಯಲಿದೆ. ಶನಿವಾರ ಸಂಜೆ 5 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಸಂಜೆ 5.30ಕ್ಕೆ ಖ್ಯಾತ ಸಂಗೀತಗಾರ್ತಿ ಎಂ.ಎಸ್. ಸುಬ್ಬುಲಕ್ಷ್ಮಿ ಅವರ ಮರಿಮೊಮ್ಮಕ್ಕಳಾದ ಎಸ್. ಐಶ್ವರ್ಯ ಮತ್ತು ಎಸ್. ಸೌಂದರ್ಯ ಸಂಗೀತ ಪ್ರಸ್ತುತಿ ನೀಡಲಿದ್ದಾರೆ. ಬಳಿಕ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಪಂಡಿತ್ ವಿನಾಯಕ ತೋರ್ವಿ ಸಂಗೀತ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

ನ.1ರಂದು ಭಾನುವಾರ ಬೆಳಗ್ಗೆ 10.30ಕ್ಕೆ ಉಸ್ತಾದ್ ರಯೀಸ್ ಮತ್ತು ಉಸ್ತಾದ್ ಹಫೀಜ್ ಬಾಲೆ ಖಾನ್ ಅವರ ಸಿತಾರ್ ಜುಗಲ್‌ಬಂದಿ ನಡೆಯಲಿದೆ. ಬಳಿಕ ನಿವೃತ್ತ ಐಎಎಸ್ ಅಧಿಕಾರಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಿ. ಮುದ್ದು ಮೋಹನ್ ಹಾಗೂ ಪಂಡಿತ್ ಕುಮಾರ ಗಂಧರ್ವ ಅವರ ಮೊಮ್ಮಗ ಪಂಡಿತ್ ಭುವನೇಶ್ ಕೊಂಕಾಳಿ ಸಂಗೀತ ಪ್ರಸ್ತುತಿ ನೀಡಲಿದ್ದಾರೆ. ಸಂಗೀತದ ಮೂಲಕ ವಿವಿಧ ಸಂಸ್ಕೃತಿ ಮತ್ತು ಪರಂಪರೆಗಳ ನಡುವೆ ಸಾಮರಸ್ಯ ಬೆಳೆಸುವುದು ಹಾಗೂ ರಾಷ್ಟ್ರೀಯ ಏಕತೆಯ ಭಾವನೆ ಬಲಪಡಿಸುವುದು ಉತ್ಸವದ ಉದ್ದೇಶವಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ.